ಕರ್ನಾಟಕಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-ADMI0EST(10)/42/2024

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 13-05-2025

## ಪರಿಚಲನಾದೇಶ

ವಿಷಯ: ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರ್ಯನಿರ್ವಹಿಸುತ್ತಿರುವ ಸಹಾಯಪಪ್ರಾಧ್ಯಾಪರಿಗೆ 7ನೇ ಎಐಸಿಟಿಇ ವೇತನಶ್ರೇಣಿ ರೂ. 79800-211500 ಲೆವೆಲ್-12 ರಿಂದ ರೂ.131400-217100 ಲೆವೆಲ್-13A1 ಸಹ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 50 ಡಿಟಿಇ 2024 ದಿನಾಂಕ:03-02-2025

******

ಉಲ್ಲೇಖದ ಆದೇಶದಲ್ಲಿ ಹೆಸರಿಸಲಾದ ಡಾ. ಯಶವಂತ ಕುಮಾರ್ ಟಿ.ಆರ್., ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಇ&ಸಿ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ ಹಾಗೂ ಡಾ. ದೇವೇಂದ್ರ ಹಂಚಿ, ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಸಿವಿಲ್ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು 7ನೇ ಎಐಸಿಟಿಇ ವೇತನಶ್ರೇಣಿ ರೂ. 79800-211500 ಲೆವೆಲ್-12 ರಿಂದ ರೂ.131400-217100 ಲೆವೆಲ್-13A1 ಕ್ಕೆ ಪದೋನ್ನತಿ ನೀಡಿರುವ ಸರ್ಕಾರದ ಆದೇಶವನ್ನು ಸಂಬಂಧಪಟ್ಟ ಅಧ್ಯಾಪಾಕರುಗಳಿಗೆ ಸಂಬಂಧಪಟ್ಟ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಪರಿಚಯಿಸಲಾಗಿದೆ..

Digitally signed by
Prasanna H
Date: 15-05-2025
ನಿರ್ದೇಶಕರು,
ತಾಂತ್ರಿಕ ಶಿಕ್ಷಣ ಇಲಾಖೆ,

ಇವರಿಗೆ:-

1. ಮಹಾಲೇಖಪಾಲರು, ಎ&ಇ, (AAO,GE-XI) ಬೆಂಗಳೂರು;
2. ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ;
3. ಸಂಬಂಧಪಟ್ಟ ಅಧ್ಯಾಪಾಕರುಗಳು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ (ಪ್ರಾಂಶುಪಾಲರ ಮುಖಾಂತರ)
4. ನೋಡಲ್ ಅಧಿಕಾರಿ, ಇ-ಆಡಳಿತ, ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು)

ಪ್ರತಿ:-

1. ಮಹಾಲೇಖಪಾಲರು, ಎ&ಇ, (AAO,GE-XI) ಬೆಂಗಳೂರು;
2. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ), ಬಹುಮಹಡಿ ಕಟ್ಟಡ, ಬೆಂಗಳೂರು;
3. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
5. ಹೆಚ್ಚುವರಿ ಪ್ರತಿ ಕಡತಕ್ಕೆ

10045428/25
~~10045280/25~~

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ, ಸಹಾಯಕ ಪ್ರಾಧ್ಯಾಪಕರಿಗೆ 7ನೇ ಎಐಸಿಟಿಇ ವೇತನಶ್ರೇಣಿ ರೂ. 79800-211500 ಲೆವೆಲ್-12 ರಿಂದ 131400-217100, ಸಹ ಪ್ರಾಧ್ಯಾಪಕರ ಲೆವೆಲ್-13A1ಗೆ ಪದೋನ್ನತಿ ನೀಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಇಡಿ 12 ಡಿಟಿಇ 2019, ದಿನಾಂಕ:24.03.2020.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 86 ಡಿಟಿಇ 2023, ದಿನಾಂಕ:07.10.2023.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಏಕ ಕಡತ ಸಂಖ್ಯೆ: DTE-ADMI0EST(10)/42/2024.

ತಾಂತ್ರಿಕ ಶಿಕ್ಷಣ ಇಲಾಖೆ ನಿರ್ದೇಶಕರ ಆಪ್ತ ಶಾಖೆ ಸಂಖ್ಯೆ: 91 ದಿನಾಂಕ: 14/5/25

**ಪ್ರಸ್ತಾವನೆ:-**

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ 7ನೇ ಎಐಸಿಟಿಇ ವೇತನವನ್ನು ದಿನಾಂಕ: 01.01.2016 ರಿಂದ ಅನ್ವಯಿಸುವಂತೆ ವಿಸ್ತರಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ಎಐಸಿಟಿಇ ಅಧಿಸೂಚನೆ ಸಂ: F.No. 61-1/RIFD/7thCPC/2016-17, ದಿನಾಂಕ:01.03.2019 ರಲ್ಲಿ ನೇಮಕಾತಿ /ಮುಂಬಡ್ತಿಗೆ ನಿಗದಿಪಡಿಸಲಾಗಿರುವ ಎಲ್ಲಾ ನಿಯಮಾವಳಿಗಳನ್ನು ಅಳವಡಿಸಿಕೊಂಡು ಹಾಗೂ ಎಐಸಿಟಿಇ ಮತ್ತು ಯುಜಿಸಿ 2010 ಮತ್ತು 2018ರ ಆದೇಶ ಸಂ:-F.1-2/2017(EC/PS) ದಿನಾಂಕ18.07.2018 UGC REGULATIONS ಮುಂಬಡ್ತಿಗೆ ನಿಗಧಿಪಡಿಸಲಾಗಿರುವ ಎಲ್ಲಾ ಮಾನದಂಡಗಳನ್ನು ಅಳವಡಿಸಿಕೊಂಡು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ 7ನೇ ಎಐಸಿಟಿಇ ವೇತನ ಶ್ರೇಣಿಯಲ್ಲಿ ಪದೋನ್ನತಿ ನೀಡುವ ಪ್ರಸ್ತಾವನೆಗಳನ್ನು ಪರಿಶೀಲಿಸಲು ಪ್ರತ್ಯೇಕ ಸ್ಕ್ರೀನಿಕರಣ ಸಮಿತಿಯನ್ನು ರಚಿಸುವ ಅಧಿಕಾರವನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಆಯುಕ್ತರ ಏಕಕಡತದಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ತಿಳಿಸಿರುವಂತೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ವಿಷಯ ತಜ್ಞರುಗಳನ್ನೊಳಗೊಂಡ ಸ್ಕ್ರೀನಿಕರಣ ಸಮಿತಿಯು ದಿನಾಂಕ: 01.07.2024 ರಿಂದ 02.07.2024 & 20.11.2024 ರಂದು ಸಭೆ ಸೇರಿ ಡಾ. ಯಶವಂತ ಕುಮಾರ ಟಿ.ಆರ್., ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಇ&ಸಿ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ ಹಾಗೂ ಡಾ. ದೇವೇಂದ್ರ ಹಂಚೆ, ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಸಿವಿಲ್ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು,

ರಾಯಚೂರು ಇವರುಗಳಿಗೆ 7ನೇ ಎಐಸಿಟಿಇ ವೇತನ ಶ್ರೇಣಿ ರೂ. 79,800-2,11,500 ಲೆವೆಲ್-12 ರಿಂದ ವೇತನ ಶ್ರೇಣಿ ರೂ. 1,31,400-2,17,100 ರಲ್ಲಿ ಲೆವೆಲ್-13A1 ಕ್ಕೆ ಸಹ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿಯನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿರುತ್ತದೆ.

ಅದರಂತೆ, ಈ ಇಬ್ಬರು ಸಹಾಯಕ ಪ್ರಾಧ್ಯಾಪಕರಿಗೆ 7ನೇ ಎಐಸಿಟಿಇ ವೇತನ ಶ್ರೇಣಿ ರೂ. 79800-211500 ಲೆವೆಲ್-12 ರಿಂದ ವೇತನ ಶ್ರೇಣಿ ರೂ. 1,31,400-2,17,100 ರಲ್ಲಿ ಲೆವೆಲ್-13A1 ಕ್ಕೆ ಸಹ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ನೀಡುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರು ಕೋರಿರುತ್ತಾರೆ. ಇವರುಗಳು ಸಹ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ಹೊಂದಲು ನಿಗದಿಪಡಿಸಲಾದ ಅರ್ಹತಾ ಮಾನದಂಡಗಳನ್ನು ಪೂರೈಸಿರುವುದು ಸ್ಥಾನೀಕರಣ ಸಮಿತಿಯ ಶಿಫಾರಸ್ಸು ಹಾಗೂ ಆಯುಕ್ತರ ಪ್ರಸ್ತಾವನೆಯಿಂದ ತಿಳಿದು ಬರುತ್ತದೆ.

ಆದ್ದರಿಂದ, ಡಾ. ಯಶವಂತ ಕುಮಾರ ಟಿ.ಆರ್., ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಇ&ಸಿ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ ಹಾಗೂ ಡಾ. ದೇವೇಂದ್ರ ಹಂಚೆ, ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಸಿವಿಲ್ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು ಇವರುಗಳಿಗೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 4458/2024ರ ಪ್ರಕರಣದಲ್ಲಿನ ಅಂತಿಮ ಆದೇಶಕ್ಕೆ ಬದ್ಧರಾಗಿರುವ ಷರತ್ತಿಗೊಳಪಟ್ಟು, 7ನೇ ಎಐಸಿಟಿಇ ವೇತನಶ್ರೇಣಿ ರೂ. 79800-211500 ಲೆವೆಲ್-12 ರಿಂದ 131400-217100 ಲೆವೆಲ್-13A1ಕ್ಕೆ ಸಹ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ನೀಡಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 50 ಡಿಟಿಇ 2025**

**ಬೆಂಗಳೂರು, ದಿನಾಂಕ: 03ನೇ ಮೇ 2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಡಾ. ಯಶವಂತ ಕುಮಾರ ಟಿ.ಆರ್., ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಇ&ಸಿ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ ಹಾಗೂ ಡಾ. ದೇವೇಂದ್ರ ಹಂಚೆ, ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಸಿವಿಲ್ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು ಇವರುಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು 7ನೇ ಎಐಸಿಟಿಇ ವೇತನಶ್ರೇಣಿ ರೂ. 79800-211500 ಲೆವೆಲ್-12 ರಿಂದ 131400-217100 ಲೆವೆಲ್-13A1 ಕ್ಕೆ ಸಹ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ನೀಡಿ ಆದೇಶಿಸಿದೆ.

| **ಕ್ರ.ಸಂ.** | **ಹೆಸರು, ಪದನಾಮ & ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ** | **ಸೇವೆಗೆ ಸೇರಿದ ದಿನಾಂಕ** | **ಮುಂಬಡ್ತಿಗೆ ಅರ್ಹತೆ ಪಡೆದ ದಿನಾಂಕ** |
|---|---|---|---|
| 01 | ಡಾ. ಯಶವಂತ ಕುಮಾರ ಟಿ.ಆರ್., ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಇ&ಸಿ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ | 29.11.2010 | 19.08.2024 |
| 02 | ಡಾ. ದೇವೇಂದ್ರ ಹಂಚೆ, ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಸಿವಿಲ್ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | 14.10.2010 | 24.02.2024 |

<u>ಷರತ್ತುಗಳು</u>:

i. 2019 ಮತ್ತು 2020ರ 7ನೇ ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಮಂಜೂರಾತಿಯು ಸರ್ಕಾರದ ಮಾರ್ಗಸೂಚಿ/ಆದೇಶಗಳಲ್ಲಿನ ನಿಬಂಧನೆಗೊಳಪಟ್ಟಿರುತ್ತದೆ. ಸದರಿ ವೇತನ ಶ್ರೇಣಿಗಳಲ್ಲಿ ನಿಗದಿಪಡಿಸಿರುವ ಎಲ್ಲಾ ಅಂಶಗಳ ಆಧಾರದ ಮೇಲೆ ಅರ್ಹ ಸಹಾಯಕ ಪ್ರಾಧ್ಯಾಪಕರುಗಳ ಮುಂಬಡ್ತಿ ಮಂಜೂರಾತಿಗೆ ಸಮಿತಿಯು ಮಾಡಿರುವ ಶಿಫಾರಸ್ಸನ್ನು ಆಧರಿಸಿ ಈ ಆದೇಶವನ್ನು ಹೊರಡಿಸಲಾಗಿದೆ.

ii. ಎಐಸಿಟಿಇ/ಯುಜಿಸಿ/ಸರ್ಕಾರ/ಇಲಾಖೆ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆ/ ಪತ್ರಗಳಲ್ಲಿ ನಿಗದಿಪಡಿಸುವ ಷರತ್ತು/ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

iii. ಸದರಿಯವರಿಗೆ ಪದೋನ್ನತಿಗೆ ಅರ್ಹತೆ ಹೊಂದಿದ ದಿನಾಂಕದಿಂದ ಅರ್ಹತಾ ದಿನಾಂಕವನ್ನು ಪರಿಗಣಿಸುವುದು ಹಾಗೂ ಸದರಿ ಪದೋನ್ನತಿಯ ಆರ್ಥಿಕ ಸೌಲಭ್ಯವನ್ನು ಭವಿಷ್ಯವರ್ತಿಯಾಗಿ ಅಂದರೆ, ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ಜಾರಿಗೊಳಿಸುವುದು.

iv. ಈ ವೃತ್ತಿ ಪದೋನ್ನತಿಯನ್ನು ಸೇವಾ ಜೇಷ್ಠತೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ.

v. ಅರ್ಹ ಸಹಾಯಕ ಪ್ರಾಧ್ಯಾಪಕರುಗಳು ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಯಾವುದೇ ತಪ್ಪು ಮಾಹಿತಿಗಳನ್ನು ಒದಗಿಸಿರುವುದು ಕಂಡುಬಂದಲ್ಲಿ ಸಂಬಂಧಿಸಿದ ಸಹಾಯಕ ಪ್ರಾಧ್ಯಾಪಕರುಗಳ ವಿವಿಧ ಹಂತದ ಮುಂಬಡ್ತಿ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆ ನೀಡದೇ ಹಿಂಪಡೆಯಲಾಗುವುದು ಹಾಗೂ ತಪ್ಪು ಮಾಹಿತಿ ಒದಗಿಸಿದ ಸಹಾಯಕ ಪ್ರಾಧ್ಯಾಪಕರುಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು.

vi. ಶಿಫಾರಸ್ಸು ಮಾಡಲಾಗಿರುವ ಅನುಬಂಧದಲ್ಲಿರುವ ಸಹಾಯಕ ಪ್ರಾಧ್ಯಾಪಕರುಗಳು ಸಲ್ಲಿಸಲಾಗಿರುವ ದಾಖಲೆಗಳಲ್ಲಿ ವ್ಯತ್ಯಾಸಗಳು, ಅಸಂಗತಗಳು ಕಂಡುಬಂದಲ್ಲಿ ಮುಂದಿನ ದಿನಗಳಲ್ಲಿ ಅದರ ಸಾಧಕ-ಬಾಧಕಗಳಿಗೆ ಸಂಪೂರ್ಣವಾಗಿ ಸಂಬಂಧಪಟ್ಟ ಸಹಾಯಕ ಪ್ರಾಧ್ಯಾಪಕರುಗಳೇ ವೈಯಕ್ತಿಕವಾಗಿ ಹೊಣೆಗಾರರಾಗಿರುತ್ತಾರೆ.

vii. ಸ್ಥಳೀಯ/ಮಹಾಲೇಖಪಾಲರ ಲೆಕ್ಕಪರಿಶೋಧನೆಗೆ ಒಳಪಡಿಸಿದಾಗ, ಯಾವುದೇ ಅಸಂಗತಗಳು ಕಂಡು ಬಂದಲ್ಲಿ ಮರು ಪರಿಶೀಲಿಸುವ ಮತ್ತು ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

viii. ಸದರಿ ಸಹಾಯಕ ಪ್ರಾಧ್ಯಾಪಕರುಗಳಿಗೆ ಪದೋನ್ನತಿ ವೇತನ ನಿಗದಿಯಲ್ಲಿ ಸರ್ಕಾರ /ಎಐಸಿಟಿಇ ನಿಯಮಗಳನ್ವಯ ಯಾವುದಾದರೂ ಲೋಪದೋಷಗಳು ಕಂಡುಬಂದಲ್ಲಿ ಅಂತಹ ಮುಂಬಡ್ತಿ ಆದೇಶವನ್ನು ರದ್ದುಪಡಿಸಿ ವೇತನ ವ್ಯತ್ಯಾಸದ ಮೊತ್ತವನ್ನು ವಸೂಲು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ix. ಸಹಾಯಕ ಪ್ರಾಧ್ಯಾಪಕರುಗಳಿಗೆ ಮುಂಬಡ್ತಿ ಮಂಜೂರಾತಿಯ ವಿವರಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಸೇವಾ ಪುಸ್ತಕದಲ್ಲಿ ನಮೂದಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

x. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ : 4458/2024ರ ಪ್ರಕರಣದಲ್ಲಿನ ಅಂತಿಮ ಆದೇಶಕ್ಕೆ ಬದ್ಧರಾಗುವ ಷರತ್ತಿಗೊಳ್ಳಪಟ್ಟಿರುತ್ತದೆ.

xi. ಮಾನ್ಯ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 5296/2018 ರಲ್ಲಿನ ಆದೇಶ ಭಾಗದ ಕಂಡಿಕೆ-10 ಮತ್ತು 11 ರಲ್ಲಿ ನೀಡಿರುವ ನಿರ್ದೇಶನವನ್ನು ಪರಿಶೀಲಿಸುವ ಷರತ್ತಿಗೆ ಒಳಪಟ್ಟಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್ ಕುಮಾರ್) 03/05/2025

**(ಎನ್.ಕುಮಾರ್)**
ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ ಮತ್ತು ಯೋಜನೆ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ&ಇ), ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಸಂಬಂಧಪಟ್ಟ ಸಹಾಯಕ ಪ್ರಾಧ್ಯಾಪಕರುಗಳಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆರವರ ಕಛೇರಿಯ ಮೂಲಕ)

**ಪ್ರತಿ:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.